ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 3 ಡಿಪಿಐ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:24.10.2017.

## ಅಧಿಸೂಚನೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಹಾಗೂ ತತ್ಸಮಾನ ವೃಂದದ ಈ ಕೆಳಕಂಡ ಅಧಿಕಾರಿಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವೇತನ ಶ್ರೇಣಿ ರೂ 40050-1050-45300-1200-52500-1350-56550ರ ಗ್ರೂಪ್-ಎ ಹಿರಿಯ ವೇತನ ಶ್ರೇಣಿಯ ಸಹ ನಿರ್ದೇಶಕರು ಹಾಗೂ ತತ್ಸಮಾನ ವೃಂದದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 32ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸ್ವತಂತ್ರ ಪ್ರಭಾರದಲ್ಲಿರಿಸಿ ಅವರುಗಳ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಲಾಗಿದೆ.

| ಕ್ರಮ ಸಂಖ್ಯೆ | ಹೆಸರು ಮತ್ತು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳ ಶ್ರೀ/ಶ್ರೀಮತಿ | ಬಡ್ತಿ ನೀಡಿ ನಿಯುಕ್ತಿಗೊಳಿಸಲಾದ ಹುದ್ದೆ ಮತ್ತು ಸ್ಥಳ |
|---|---|---|
| 1. | ಜಿ.ಆರ್. ಬಸವರಾಜು, ಉಪನಿರ್ದೇಶಕರು(ಪ್ರೌಢ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಜಂಟಿ ನಿರ್ದೇಶಕರು, ಶಾಲಾ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ಖಾಲಿ ಹುದ್ದೆಗೆ. |
| 2. | ದಶರಥ ಮಲ್ಲೇಶ ದಾನೋಜಿ, ಉಪನಿರ್ದೇಶಕರು(ಆಡಳಿತ), ಕೊಡಗು. | ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಖಾಲಿ ಹುದ್ದೆಗೆ. |
| 3. | ಕೆ. ಪದ್ಮಾವತಿ, ಪ್ರವಾಚಕರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಚಿತ್ರದುರ್ಗ | ಸಹ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು. ಖಾಲಿ ಹುದ್ದೆಗೆ. |
| 4. | ಶೇಖರ, ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಉಡುಪಿ. | ಸಹ ನಿರ್ದೇಶಕರು, ಮೈಸೂರು ವಿಭಾಗ, ಮೈಸೂರು ಖಾಲಿ ಹುದ್ದೆಗೆ. |
| 5. | ಕೃಷ್ಣಾಜೀ ಎಸ್. ಕರೀಚಣ್ಣವರ್, ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬಾಗಲಕೋಟೆ. | ಸಹ ನಿರ್ದೇಶಕರು, ಮಧ್ಯಾಹ್ನ ಉಪಾಹಾರ ಯೋಜನೆ, ಬೆಂಗಳೂರು ಇಲ್ಲಿನ ಖಾಲಿ ಹುದ್ದೆಗೆ. |
| 6. | ಬಿ.ಕೆ.ಎಸ್. ವರ್ಧನ್, ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು. | ಸಹ ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಧಾರವಾಡ ಖಾಲಿ ಹುದ್ದೆಗೆ. |

...2

| | | |
|---|---|---|
| 7. | ಎಂ.ಎಸ್. ಪ್ರಸನ್ನ ಕುಮಾರ್ ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಧಾರವಾಡ. | ಸಹ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು ಖಾಲಿ ಹುದ್ದೆಗೆ. |

ಷರತ್ತುಗಳು:-

1. ನಿಯಮ 32ರಡಿ ಮಾಡಲಾಗುವ ಸ್ವತಂತ್ರ ಪ್ರಭಾರ ವ್ಯವಸ್ಥೆಯು ಕ್ರಮ ಬದ್ಧ ಮುಂಬಡ್ತಿ ಬದಲಿಗೆ ಮಾಡುವ ಒಂದು ತಾತ್ಕಾಲಿಕ ವ್ಯವಸ್ಥೆಯಾಗಿದೆ. ಅದು ಮುಂಬಡ್ತಿ ಅಲ್ಲ. ಸ್ವತಂತ್ರ ಪ್ರಭಾರದಲ್ಲಿರಿಸುವ ಆದೇಶವನ್ನು ಯಾವುದೇ ಸಂದರ್ಭದಲ್ಲಾದರೂ ಹಿಂದಕ್ಕೆ ಪಡೆಯಲು ಆಸ್ಪದವಿರುತ್ತದೆ.
2. ಈ ವ್ಯವಸ್ಥೆಯು ತಾತ್ಕಾಲಿಕವಾಗಿದ್ದು, ಪೂರ್ವಾನ್ವಯ ಮುಂಬಡ್ತಿಗೆ ಹಕ್ಕೊತ್ತಾಯ ಮಾಡುವಂತಿಲ್ಲ.
3. ಈ ವ್ಯವಸ್ಥೆಯು ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿ:09/02/2017ರಂದು ಸಿವಿಲ್ ಅಪೀಲ್ ಸಂಖ್ಯೆ:2368/2011ರಲ್ಲಿ ಶ್ರೀ ಬಿ.ಕೆ. ಪವಿತ್ರ ನ್ಯಾಯಾಲಯದಲ್ಲಿ ನೀಡಿರುವ ತೀರ್ಪಿನ ವಿರುದ್ಧ ಸಲ್ಲಿಸಲಾಗಿರುವ ಪುನರ್ ಪರಿಶೀಲನಾ ಅರ್ಜಿಯ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳನಿಯುಕ್ತಿಗೊಳಿಸಲಾದ ಅಧಿಕಾರಿಗಳು ಸ್ಥಳನಿಯುಕ್ತಿ/ನೇಮಕಗೊಂಡ ಸ್ಥಳಗಳಲ್ಲಿ ಕೂಡಲೇ ಕಾರ್ಯವರದಿ ಮಾಡಿಕೊಂಡು ಸಿ.ಟಿ.ಸಿ. ಪ್ರತಿಯನ್ನು ಸರ್ಕಾರಕ್ಕೆ ಒದಗಿಸುವಂತೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಡಿ. ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಆಡಳಿತ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಎ&ಇ), ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಕರ್ನಾಟಕ, ಬೆಂಗಳೂರು-1.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು/ ಮೈಸೂರು / ಉಡುಪಿ/ಚಿತ್ರದುರ್ಗ/ಬಾಗಲಕೋಟೆ/ಧಾರವಾಡ/ಉತ್ತರ ಕನ್ನಡ.
5) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ / ಧಾರವಾಡ.
6) ನಿರ್ದೇಶಕರು. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು.
7) ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ನಂ.4, 100 ಅಡಿ ವರ್ತುಲ ರಸ್ತೆ, ಬನಶಂಕರಿ 3ನೇ ಹಂತ, ಬೆಂಗಳೂರು-560 085.

8) ಸಂಬಂಧಪಟ್ಟ ಅಧಿಕಾರಿಗಳಿಗೆ(ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ).
9) ಮಾಹಿತಿ ಕೇಂದ್ರ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು-560 001.
10) ಶಾಖಾರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.

ಪ್ರತಿಗಳು ಮಾಹಿತಿಗಾಗಿ:-

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.